# ಮುಮ್ಮದಾಪುರದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ರಾಷ್ಟ್ರೀಯ ಅವಿಷ್ಕಾರ ಸಪ್ತಾಹ

ಮುಮ್ಮದಾಪುರ, ೧೯-ದೇಶ ಕಂಡ ಹೆಮ್ಮೆಯ ವಿಜ್ಞಾನಿ ಡಾ ಎ ಪಿ ಜೆ ಕಲಾಂ ರವರಜನ್ಮ ದಿನದ ಅಂಗವಾಗಿ ರಾಷ್ಟ್ರೀಯ ಅವಿಷ್ಕಾರ ಸಪ್ತಾಹವನ್ನು ಇಲ್ಲಿಯ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಆಚರಿಸಲಾಯಿತು.

ಈ ವರ್ಷ ಶಾಲಾ ಕಾಲೇಜುಗಳಲ್ಲಿ ಅಚರಿಸುವುದು ಸವಾಲಿನ ವಿಷಯವಾಗಿದ್ದರೂಕೂಡ ಸರ್ಕಾರಿ ಶಾಲೆಗಳಲ್ಲಿ ಎಲ್ಲ ತಾಂತ್ರಿಕ ಸೌಲಭ್ಯ ಪಡೆದು, ಶಿಕ್ಷಕರ ಮತ್ತು ಪಾಲಕರ ಸಹಕಾರದಿಂದ ವಿಶಿಷ್ಟ ರೀತಿಯಲ್ಲಿ ಗೂಗಲ ಮೀಟ ಮಾಡುವ ಮೂಲಕ ಆಚರಿಸಲಾಯಿತು,

ಈ ಸಂದರ್ಭದಲ್ಲಿ ಗೂಗಲ ಮೀಟನಲ್ಲಿ ಭಾಗವಹಿಸಿದ್ದ ರಾಜ್ಯ ನೋಡಲ ಅಧಿಕಾರಿ ಡಿ ಎಸ್ ಇ ಆರ್ ಟಿ ಹಿರಿಯ ಸಹಾಯಕ ನಿರ್ದೇಶಕ ಡಾ. ಚಂದ್ರಶೇಖರ ಮಾತನಾಡಿ, ಇಂತಹ ಚಟುವಟಿಕೆಗಳಿಂದ ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವನೆ ಬೆಳೆಯುತ್ತದೆ ಎಂದರು.

ಡಯಟ್ ಹಿರಿಯ ಉಪನ್ಯಾಸಕ ಅರ್ ವೈ ಕೊಣ್ಣೂರ ಮಾತನಾಡಿ, ಪ್ರತಿ ವರ್ಷವೂ ಈ ಶಾಲೆಯಲ್ಲಿಉತ್ತಮ ವಾಗಿ ಕಾರ್ಯಕ್ರಮ ಆಯೋಜಿಸುತ್ತಿದ್ದು ಮಕ್ಕಳೂ ಇದರ ಲಾಭ ಪಡೆದು ಸಕ್ರೀಯವಾಗಿ ಭಾಗವಹಿಸಲು ಕರೆ ನೀಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎ ಎಸ್ ಹತ್ತಳ್ಳಿ, ಕ್ಷೇತ್ರ ಸಮನ್ವಯಾಧಿಕಾರಿಣಿ ಎಸ್ ಡಿ ಮೋಸಲಗಿ ಭಾಗಹಿಸಿದ್ದರು. ವಿಜ್ಞಾನ ಶಿಕ್ಷಕ ಮಹಾಂತೇಶ.ಜಿ.ಕೆ ಮತ್ತು ಸೀಮಾ ವೈದ್ಯ ಚಟುವಟಿಕೆಗಳ ವಿವರಿಸಿದರು. ಉಪಪ್ರಾಚಾರ್ಯ ರಾಘವೇಂದ್ರ ಪುರೋಹಿತ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.